ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 07ನೇ ಫೆಬ್ರವರಿ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ಶಾಸನ ರಚನೆ

<u>ವಿಧೇಯಕಗಳನ್ನು ಮಂಡಿಸುವುದು</u>

1) **ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು :-**

ಅ) 2018ನೇ ಸಾಲಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2) **ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು :-**

ಅ) 2018ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಚರ್ಚೆ.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ ರೇವಣ್ಣ, ವೈ.ಎಸ್.ವಿ ದತ್ತ, ಹೆಚ್.ಎಸ್. ಪ್ರಕಾಶ್ ಮತ್ತು ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು** – ರಾಜ್ಯದಲ್ಲಿ ವಾಣಿಜ್ಯ ಬೆಳೆಯಾದ ತೆಂಗು ಮತ್ತು ಅಡಿಕೆ ಬೆಳೆಯು ತೀವ್ರ ಬರಗಾಲದಿಂದ ನಾಶವಾಗಿ ಆರ್ಥಿಕ ನಷ್ಟವುಂಟಾಗಿದ್ದು ಸರ್ಕಾರವು ಕೂಡಲೇ ಕೇರಳ ರಾಜ್ಯ ಮಾದರಿಯಂತೆ ಪರಿಹಾರ ಪ್ಯಾಕೇಜ್ ಘೋಷಿಸುವ ಕುರಿತು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಎನ್.ಹೆಚ್. ಕೋನರೆಡ್ಡಿ, ಕೆ. ಗೋಪಾಲಯ್ಯ ಮತ್ತು ಮಧು ಬಂಗಾರಪ್ಪ ಇವರುಗಳು** – ಕಳಸಾ ಬಂಡೂರಿ ಮಹದಾಯಿ ಯೋಜನೆಯ ಜಾರಿಗಾಗಿ ರೈತರು ಹೋರಾಟ ನಡೆಸುತ್ತಿದ್ದು ಯೋಜನೆ ಅನುಷ್ಠಾನಗೊಳಿಸಲು ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಜೊತೆ ಚರ್ಚಿಸುವ ಕುರಿತು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಎನ್.ಎ. ಹ್ಯಾರಿಸ್ ಇವರು** – ರಾಜ್ಯದಲ್ಲಿ ಅಗ್ರಿಗೋಲ್ಡ್ ಸಮೂಹ ಸಂಸ್ಥೆಗಳು ಗ್ರಾಹಕರು ಹಾಗೂ ಏಜೆಂಟರುಗಳಿಗೆ ಠೇವಣಿ ಹಣವನ್ನು ಹಿಂದಿರುಗಿಸದೇ ವಂಚಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

2) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಇವರು** – ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ಕ್ರಾಫರ್ಡ್ ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3) **ಡಾ॥ ರಫೀಕ್ ಅಹ್ಮದ್. ಎಸ್ ಇವರು** – ಬೆಂಗಳೂರಿನ ಇಂದಿರಾ ನಗರದಲ್ಲಿರುವ ಸರ್ಕಾರಿ ಕಿವುಡ ಮತ್ತು ಮೂಕ ಮಕ್ಕಳ ವಸತಿಯುತ ಶಾಲೆಯ ನಿವೃತ್ತಿ ಹೊಂದಿರುವ ಶಿಕ್ಷಕರುಗಳಿಗೆ ಪಿಂಚಣಿ ನೀಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಸುರೇಶ್‌ಗೌಡ. ಬಿ ಇವರು** – ತುಮಕೂರು ತಾಲ್ಲೂಕು, ಹೆಬ್ಬೂರು ಹೋಬಳಿ, ಕರಡಗೆರೆ ಕಾವಲ್ ಗ್ರಾಮದಲ್ಲಿ ಬಹಳ ವರ್ಷಗಳಿಂದ ಅಕ್ರಮವಾಗಿ ಸಾಗುವಳಿ ಮಾಡಿಕೊಂಡು ಬರುತ್ತಿರುವ ರೈತರು ನಮೂನೆ 50 ಮತ್ತು 53ರಡಿ ಅರ್ಜಿ ಸಲ್ಲಿಸಿದ್ದು ಅವರುಗಳಿಗೆ ಭೂಮಿಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ ಮತ್ತು ಕೆ.ಎಂ ಶಿವಲಿಂಗೇಗೌಡ ಇವರುಗಳು** – ಹಾಸನ ತಾಲ್ಲೂಕಿನ ದುದ್ದ ಮತ್ತು ಶಾಂತಿ ಗ್ರಾಮ ಹೋಬಳಿ ಮತ್ತು ಚನ್ನರಾಯಪಟ್ಟಣ ತಾಲ್ಲೂಕಿನ ದಂಡಿಗನ ಹಳ್ಳಿ ಹೋಬಳಿಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ತೀವ್ರ ತೊಂದರೆಯಾಗಿದ್ದು, ಕೂಡಲೇ ಕುಡಿಯುವ ನೀರಿನ ಕಾಮಗಾರಿಗಳಿಗೆ ಅನುದಾನ ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

6) **ಶ್ರೀ ಬಿ.ವೈ ರಾಘವೇಂದ್ರ ಇವರು** – ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ಸೇರಿದಂತೆ ಹಲವು ತಾಲ್ಲೂಕುಗಳಲ್ಲಿ ತೀವ್ರ ಬರಗಾಲದಿಂದ ಜನ – ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವವುಂಟಾಗಿದ್ದು, ಜಿಲ್ಲೆಯಲ್ಲಿನ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಅವಶ್ಯ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7) **ಶ್ರೀಯುತರುಗಳಾದ ಎನ್.ಹೆಚ್. ಕೋನರೆಡ್ಡಿ, ಕೆ. ಗೋಪಾಲಯ್ಯ ಮತ್ತು ಮಧು ಬಂಗಾರಪ್ಪ ಹಾಗೂ ಇತರರು** – ಕಡಲೆ ಖರೀದಿಗಾಗಿ ರಾಜ್ಯ ಸರ್ಕಾರ ಖರೀದಿ ಕೇಂದ್ರಗಳನ್ನು ತೆರೆದು ದರ ನಿಗದಿಪಡಿಸಿರುವುದರ ಜೊತೆಗೆ ಕೆಲವು ನಿಬಂಧನೆಗಳನ್ನು ವಿಧಿಸಿರುವುದರಿಂದ ರೈತರಿಗೆ ನಷ್ಟವುಂಟಾಗುತ್ತಿರುವುದರಿಂದ ಬೆಳೆದ ಕಡಲೆಯನ್ನು ಸಕಾಲದಲ್ಲಿ ಹಾಗೂ ಪೂರ್ಣ ಪ್ರಮಾಣದಲ್ಲಿ ಖರೀದಿ ಮಾಡಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

8) **ಶ್ರೀ ಹೆಚ್.ಡಿ. ರೇವಣ್ಣ ಇವರು** – ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿ ಆನೆಕೆರೆ ಶಂಭುದೇವರ ಕೆರೆಯಿಂದ ತಾಲ್ಲೂಕಿನ 26 ಕೆರೆಗಳಿಗೆ ಕುಡಿಯುವ ನೀರಿಗಾಗಿ ನೀರು ಒದಗಿಸುವ ಏತ ನೀರಾವರಿ ಯೋಜನೆಯ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ವಿಷಯದ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಹೆಚ್.ಎಸ್. ಪ್ರಕಾಶ್ ಇವರು** – ಹಾಸನ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಮಹಿಳಾ ಪ್ರಥಮದರ್ಜೆ, ಗೃಹ ವಿಜ್ಞಾನ ಮತ್ತು ಕಾನೂನು ಕಾಲೇಜು ಹಾಗೂ ಪ್ರಥಮ ದರ್ಜೆ ಹಲವು ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳ ಕೊರತೆಯಿದ್ದು ಕೂಡಲೇ ಮೂಲಭೂತ ಸೌಕರ್ಯಕ್ಕಾಗಿ ಅವಶ್ಯ ಅನುದಾನ ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

10) **ಶ್ರೀ ಸಾ.ರಾ. ಮಹೇಶ್ ಇವರು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕೆಂಪೇಗೌಡ ಬಡಾವಣೆ ಹಾಗೂ ಬೆಂಗಳೂರು ಪಶ್ಚಿಮ ಮತ್ತು ದಕ್ಷಿಣ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಕೈಗೊಂಡಿರುವ ಟೆಂಡರ್ ಪ್ರಕ್ರಿಯೆಯಲ್ಲಿ ನಡೆದಿರುವ ಅವ್ಯವಹಾರದಿಂದ ನಷ್ಟವುಂಟಾಗಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

11) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ, ಹೆಚ್.ಡಿ. ರೇವಣ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಇವರುಗಳು** – ಹಾಸನ ಜಿಲ್ಲೆಯ ಅರಸೀಕೆರೆ, ಸಕಲೇಶಪುರ, ಚನ್ನರಾಯಪಟ್ಟಣ ಮತ್ತು ಹೊಳೆನರಸೀಪುರ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿನಿಲಯಗಳಲ್ಲಿ ಹೊರಸಂಪನ್ಮೂಲ ಏಜೆನ್ಸಿಯವರಿಂದ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಸಕಾಲದಲ್ಲಿ ವೇತನ ಪಾವತಿಯಾಗದೇ ಇರುವುದರಿಂದ ಏಜೆನ್ಸಿಯನ್ನು ಕಪ್ಪು ಪಟ್ಟಿಗೆ ಸೇರಿಸಿ ಅಲ್ಲಿನ ಸಿಬ್ಬಂದಿಗೆ ಕೂಡಲೇ ವೇತನ ಪಾವತಿಸುವ ವಿಷಯದ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm